12) ಬಳ್ಳಾರಿ ಜಿಲ್ಲೆ ಬಳ್ಳಾರಿ ತಾಲ್ಲೂಕಿನ 30 ಗ್ರಾಮಗಳಲ್ಲಿ 1997-98ನೇ ಸಾಲಿನ ಭೂ ಕಂದಾಯ ಮನ್ನಾ ಮಾಡಿ 1.3.99ರಂದು ಹೊರಡಿಸಿದ ಆರ್‌ಟಿ 357 ಟಿಆರ್ ಎಂ 98ನೇ ಸಂಖ್ಯೆಯ ಅಧಿಸೂಚನೆ

13) ಮೈಸೂರು ಜಿಲ್ಲೆ ಮೈಸೂರು ತಾಲ್ಲೂಕಿನ 13 ಗ್ರಾಮಗಳ 1997-98ನೇ ಸಾಲಿನ ಭೂ ಕಂದಾಯ ಮನ್ನಾ ಮಾಡುವ ಸಂಬಂಧದಲ್ಲಿ 1-3-1999ರಂದು ಹೊರಡಿಸಿದ ಆರ್‌ಡಿ 349 ಟಿಆರ್‌ಎಂ 98ನೇ ಸಂಖ್ಯೆಯ ಅಧಿಸೂಚನೆಗಳನ್ನು ಮಂಡಿಸುತ್ತೇನೆ

ಉಪಾಧ್ಯಕ್ಷರು ಕಾಗದ ಪತ್ರಗಳನ್ನು ಮಂಡಿಸಲಾಯಿತು

3 ಪ್ರಕಟಣೆ

ಉಪಾಧ್ಯಕ್ಷರು ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶ ಬಂದಿರುತ್ತದೆ:

ಕರ್ನಾಟಕ ವಿಧಾನಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಯ ನಿಯಮ 118ರ ಮೇರೆಗೆ ದಿನಾಂಕ : 30-3-99ರಂದು ವಿಧಾನ ಪರಿಷತ್ತು ಈ ಕೆಳಕಂಡ ವಿಷಯಗಳನ್ನು ಯಾವುದೇ ತಿದ್ದುಪಡಿಯಿಲ್ಲದೆ ಅನುಮೋದಿಸಿದೆ ಎಂದು ಈ ಮೂಲಕ ತಿಳಿಸುತ್ತೇನೆ.

1) ಕರ್ನಾಟಕ ಧನವಿನಿಯೋಗ ವಿಧೇಯಕ 1999
2) ಕರ್ನಾಟಕ ಧನವಿನಿಯೋಗ (ಲೇಖಾನುದಾನ) ವಿಧೇಯಕ 1999
3) ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕ 1999
4) ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕ1999
5) ಕರ್ನಾಟಕ ಸ್ಟ್ಯಾಂಪು (ಎರಡನೇ ತಿದ್ದುಪಡಿ) ವಿಧೇಯಕ 1999
6) ಕರ್ನಾಟಕ ಮೋಟಾರು ವಾಹನಗಳ ತೆರಿಗೆ (ತಿದ್ದುಪಡಿ) ವಿಧೇಯಕ 1999

4. ಶಾಸನ ರಚನೆ ಕಾರ್ಯಕಲಾಪಗಳು

ವಿಧೇಯಕಗಳನ್ನು ಮಂಡಿಸುವುದು

(1) ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ಭತ್ಯೆಗಳ ತಿದ್ದುಪಡಿ ವಿಧೇಯಕ 1999 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಸಚಿವರು) (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ) :- ಮಾನ್ಯ ಉಪಾಧ್ಯಕ್ಷರೆ 1999ರ ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು :- ಪ್ರಸ್ತಾವ ಏನೆಂದರೆ:-

1999ರ ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ಭತ್ಯೆಗಳ ತಿದ್ದುಪಡಿ ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖೆಯ ಸಚಿವರು) (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರ ಪರವಾಗಿ):

ಮಾನ್ಯ ಉಪಾಧ್ಯಕ್ಷರೆ 1999 ರ ಕರ್ನಾಟಕ ಸಂಸದೀಯ ಕಾರ್ಯದರ್ಶಿಗಳ ಭತ್ಯೆಗಳ ತಿದ್ದುಪಡಿ *ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.*

ಉಪಾಧ್ಯಕ್ಷರು ವಿಧೇಯಕವನ್ನು ಮಂಡಿಸಲಾಗಿದೆ.

(2)ಕರ್ನಾಟಕ ಗೃಹ ನಿರ್ಮಾಣ ಮಂಡಳಿ (ತಿದ್ದುಪಡಿ)ವಿಧೇಯಕ 1999 ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖೆಯ ಸಚಿವರು) (ವಸತಿ ಸಚಿವರ ಪರವಾಗಿ) : ಮಾನ್ಯ ಉಪಾಧ್ಯಕ್ಷರೆ 1999ರ ಕರ್ನಾಟಕ ಗೃಹ ನಿರ್ಮಾಣ ಮಂಡಲಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಉಪಾಧ್ಯಕ್ಷರು : ಪ್ರಸ್ತಾವ ಏನೆಂದರೆ

1999ರ ಕರ್ನಾಟಕ ಗೃಹ ನಿರ್ಮಾಣ ಮಂಡಳಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಪಿ.ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ವಾರ್ತಾ ಮತ್ತು ಪ್ರಚಾರ ಇಲಾಖೆಯ ಸಚಿವರು) (ವಸತಿ ಸಚಿವರ ಪರವಾಗಿ) :- ಮಾನ್ಯ ಉಪಾಧ್ಯಕ್ಷರೆ 1999 ರ ಕರ್ನಾಟಕ ಗೃಹ ನಿರ್ಮಾಣ ಮಂಡಳಿ ತಿದ್ದುಪಡಿ ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಉಪಾದ್ಯಕ್ಷರು : ** ವಿಧೇಯಕವನ್ನು ಮಂಡಿಸಲಾಗಿದೆ.**

ಉಪಾಧ್ಯಕ್ಷರು : ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕ 1999 ಅನ್ನು ಮಾನ್ಯ ಮಂತ್ರಿಗಳು ಮಂಡಿಸುವುದು.

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ್ ರಾಜ್ ಸಚಿವರು :- ಮಾನ್ಯ ಉಪಾಧ್ಯಕ್ಷರು 1999ರ ಕರ್ನಾಟಕ ಪಂಚಾಯತ್ ರಾಜ್ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಶ್ರೀ ಎಂ ವೈ. ಘೋರ್ಪಡೆ (ಸೊಂಡೂರು) - ಇದು ಎಷ್ಟರ ಮಟ್ಟಿಗೆ ಸಮರ್ಪಕವೆಂದು ತಮ್ಮ ಮುಖಾಂತರ ಮಾನ್ಯ ಸಚಿವರಲ್ಲಿ ಕೇಳಬಯಸುತ್ತೇನೆ. ಹೈಕೋರ್ಟ್‌ನವರು ಬಹಳ ಸ್ಪಷ್ಟವಾಗಿ ಇದನ್ನು ಇಗ್ನೋರ ಮಾಡಬೇಕು ಇದು ಸಂವಿಧಾನವನ್ನು ಹೊಡೆದು ಹಾಕುವುದಕೋಸ್ಕರ ಮಾಡಿರತಕ್ಕಂಥ ಒಂದು ತಂತ್ರ ಎನ್ನುವ ದಾಟಿಯಲ್ಲಿ ಹೇಳಿದ್ದಾರೆ. ಅವರು ಕೊಟ್ಟಂಥ ತೀರ್ಪನ್ನು ಸಂಪೂರ್ಣವಾಗಿ ನಿರ್ಲಕ್ಷ್ಯ ಮಾಡಿ ಈ ವಿಧೇಯಕವನ್ನು ಇಲ್ಲಿ ಮಂಡಿಸಿದರೆ ಹೇಗೆ ? ತಾವು ಮಾಡಿರುವ ಸುಗ್ರೀವಾಜ್ಞೆಗೋಸ್ಕರವಾಗಿ ತಾವು ಈ ಬಿಲ್‌ನ್ನು ತಂದಿರುವುದು. ಈ ರೀತಿ ಮಂಡನೆ ಮಾಡಿದರೆ ಏನು ಅರ್ಥವಾಗುತ್ತದೆ. ಹೈಕೋರ್ಟ್ ಹೇಳಿರುವ ಬಗ್ಗೆ ತಮಗೆ ಯಾವುದೇ ವಿಶ್ವಾಸ ಹಾಗೂ ಆದರ ಇಲ್ಲವೆಂದು ಅರ್ಥವಾಗುತ್ತದೆ. ಈ ಸರ್ಕಾರದ ಉದ್ದೇಶವೇನು ಎಂಬುದನ್ನು ಮೊದಲು ಹೇಳಿ.

---

* ಸಹಬಂಧ I

** ಸಹಬಂಧ II